# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಬಗೆಯ ಅಂಗವಿಕಲರಿಗೆ ವೈದ್ಯಕೀಯ ಪ್ರಮಾಣ ಪತ್ರಗಳನ್ನು ನೀಡುವ ವಿಧಾನವನ್ನು ಸರಳೀಕರಿಸುವ ಬಗ್ಗೆ.

ಓದಲಾಗಿದೆ:
1) ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ:16-19/97, ಎನ್‌ಐ-1, ದಿನಾಂಕ:01.06.2001.
2) ಸರ್ಕಾರದ ಆದೇಶ ಸಂಖ್ಯೆ: ಮಮಇ 143 ಪಿಹೆಚ್‌ಪಿ 2003, ದಿನಾಂಕ:12.03.2003.
3) ಸರ್ಕಾರದ ಆದೇಶ ಸಂಖ್ಯೆ: ಮಮಇ 107 ಪಿಹೆಚ್‌ಪಿ 2003, ದಿನಾಂಕ:11.07.2003.
4) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆದೇಶ ಸಂಖ್ಯೆ: ಆಕುಕ:15:ಐಎಂಇ:2004, ದಿನಾಂಕ: 20.10.2004.
5) ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸುತ್ತೋಲೆ ಸಂಖ್ಯೆ: ಹೆಚ್‌ಇಟಿ:ಡಿಪಿ:58:07-08, ದಿನಾಂಕ:17.09.2007
6) ಕೇಂದ್ರ ಸರ್ಕಾರದ ಮಾರ್ಗಸೂಚಿ ಸಂಖ್ಯೆ:ಡಿ.ಓ.ಸಂ:16-02:2007, ಡಿಡಿ-3, ದಿನಾಂಕ:15.02.2010
7) ದಿನಾಂಕ:13.05.2010 ರಂದು ಸರ್ಕಾರದ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡವಳಿ.
8) ದಿನಾಂಕ:23.05.2011 ಮತ್ತು ದಿನಾಂಕ:2.8.2011ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ

## ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಕೇಂದ್ರ ಸರ್ಕಾರದ ಅಧಿಸೂಚನೆಯಲ್ಲಿ ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಅಧಿಕಾರಯುಕ್ತ ಸಚಿವಾಲಯವು ವಿವಿಧ ಬಗೆಯ ಅಂಗವಿಕಲತೆಯನ್ನು ಗುರುತಿಸಿ ವೈದ್ಯಕೀಯ ಪ್ರಮಾಣ ಪತ್ರಗಳನ್ನು ನೀಡುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಿರುತ್ತದೆ. ಅದರಂತೆ ಮೇಲಿನ ಕ್ರಮ ಸಂಖ್ಯೆ (2) ಮತ್ತು (3) ರಲ್ಲಿ ಕೇಂದ್ರ ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಗಳನ್ವಯ ವೈದ್ಯಕೀಯ ಪ್ರಮಾಣ ಪತ್ರಗಳನ್ನು ವಿತರಿಸಲು ಜಿಲ್ಲಾಮಟ್ಟದ ವೈದ್ಯಕೀಯ ಮಂಡಳಿಯನ್ನು ರಚಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಸುತ್ತೋಲೆಯಲ್ಲಿ ತಾಲ್ಲೂಕುಮಟ್ಟದಲ್ಲಿ ವೈದ್ಯಕೀಯ ಪ್ರಮಾಣ ಪತ್ರಗಳನ್ನು ವಿತರಿಸಲು ತಾಲ್ಲೂಕು ಮಟ್ಟದ ವೈದ್ಯಕೀಯ ಮಂಡಳಿಯನ್ನು ರಚಿಸಿ ಆದೇಶಿಸಿರುತ್ತಾರೆ. ಕ್ರಮ ಸಂಖ್ಯೆ (5)ರ ಆದೇಶದಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಮಾನಸಿಕ ಆರೋಗ್ಯ ತಜ್ಞರು ಲಭ್ಯವಿಲ್ಲದಿರುವ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಕೀಯ ಮಂಡಳಿಯು ಮಾನಸಿಕ ರೋಗಿಗಳಿಗೆ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲು ಖಾಸಗಿ ವೈದ್ಯರ ಸಹಾಯ ಪಡೆಯಲು ಅನುಮತಿ ನೀಡಿರುತ್ತಾರೆ.

...2